# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 671
ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 21-02-2023
ಉತ್ತರಿಸುವ ಸಚಿವರು : ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಬಾಲ್ಯವಿವಾಹ ಮತ್ತು ಮಹಿಳೆಯರ ಮೇಲಿನ ಭಯಾನಕ ಅಪರಾಧ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಈ ಭಯಾನಕ ಪಿಡುಗಗಳನ್ನು ತೊಲಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | • ಬಾಲ್ಯವಿವಾಹವನ್ನು ತಡೆಗಟ್ಟಲು ಸರ್ಕಾರವು ಕೈಗೊಂಡಿರುವ ಕ್ರಮಗಳನ್ನು **ಅನುಬಂಧ-1**ರಲ್ಲಿ ಒದಗಿಸಲಾಗಿದೆ.<br>• ಮಹಿಳೆಯರ ಮೇಲಿನ ಅಪರಾಧ ಪ್ರಕರಣಗಳನ್ನು ತಡೆಯಲು ಸರ್ಕಾರವು ಕೈಗೊಂಡಿರುವ ಕ್ರಮಗಳನ್ನು **ಅನುಬಂಧ-2** ರಲ್ಲಿ ಒದಗಿಸಲಾಗಿದೆ. |
| ಆ) | ರಾಜ್ಯದಲ್ಲಿ ಸುಮಾರು 14 ಜಿಲ್ಲೆಗಳಲ್ಲಿ ಬಾಲ್ಯವಿವಾಹ ಪ್ರಕರಣಗಳು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೇಯೇ; ಬಂದಿದ್ದಲ್ಲಿ, ಬಾಲ್ಯವಿವಾಹ ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಬಂದಿದೆ.<br>ಬಾಲ್ಯವಿವಾಹವನ್ನು ತಡೆಗಟ್ಟಲು ಸರ್ಕಾರವು ಕೈಗೊಂಡಿರುವ ಕ್ರಮಗಳನ್ನು **ಅನುಬಂಧ-1**ರಲ್ಲಿ ಒದಗಿಸಲಾಗಿದೆ. |
| ಇ) | ಬಾಲ್ಯವಿವಾಹ ತಡೆಗೆ ಸರ್ಕಾರದ ಅಸಡ್ಡೆ ಯಾಕೆ; ಕೈಗೊಂಡಿರುವ ಕ್ರಮಗಳೇನು? | ಬಾಲ್ಯವಿವಾಹ ತಡೆಗೆ ಸರ್ಕಾರದಿಂದ ಬಾಲ್ಯವಿವಾಹ ನಿಷೇಧ ಕಾಯ್ದೆ ಅನುಷ್ಠಾನ, ತರಬೇತಿ ಕಾರ್ಯಕ್ರಮಗಳು, ಅರಿವು ಮೂಡಿಸುವ ಕಾರ್ಯಕ್ರಮಗಳು ಹಾಗೂ ಬಾಲ್ಯವಿವಾಹ ನಿಷೇದಾಧಿಕಾರಿಗಳಿಗೆ ಕರ್ತವ್ಯ ನಿರ್ವಹಿಸಲು ಅನುಕೂಲವಾಗುವಂತೆ SOP ಸಿದ್ಧಪಡಿಸಿರುವುದು ಸೇರಿದಂತೆ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಸರ್ಕಾರ ಅಸಡ್ಡೆ ತೋರಿರುವುದಿಲ್ಲ. |

**ಸಂಖ್ಯೆ:ಮಮಇ 27 ಮಮಅ 2023**

Halappa B A

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರು.

# ಅನುಬಂಧ 1

**ಬಾಲ್ಯವಿವಾಹ ತಡೆಗೆ ಸರ್ಕಾರದಿಂದ ಕೈಗೊಳ್ಳಲಾದ ಕ್ರಮಗಳು ಈ ಕೆಳಗಿನಂತಿವೆ.**

- ಬಾಲ್ಯವಿವಾಹ ನಿಷೇಧ ಕಾಯ್ದೆ 2006 ಹಾಗೂ ಬಾಲ್ಯವಿವಾಹ ನಿಷೇಧ (ಕರ್ನಾಟಕ) ನಿಯಮಗಳು 2014ನ್ನು ರಾಜ್ಯಾದಂತ ಜಾರಿಗೊಳಿಸಲಾಗುತ್ತಿದೆ.

- ಬಾಲ್ಯವಿವಾಹ ನಿಷೇಧ ಕಾಯ್ದೆ-2006ನ್ನು ಬಲಪಡಿಸಲು ಕರ್ನಾಟಕ ರಾಜ್ಯವು ಕಾಯ್ದೆಗೆ ತಿದ್ದುಪಡಿಯನ್ನು ತಂದಿದ್ದು,ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ) ಅಧಿನಿಯಮ-2016ರನ್ನು ದಿ:03.03.2018ರಿಂದ ಜಾರಿಗೆ ತಂದಿರುತ್ತದೆ.

- ಬಾಲ್ಯ ವಿವಾಹ ನಿಷೇಧ ಕರ್ನಾಟಕ ನಿಯಾವಳಿಗಳು-2014ನ್ನು ಪರಿಷ್ಕರಣೆ ಮಾಡಲು ರಾಷ್ಟ್ರೀಯ ಕಾನೂನು ಶಾಲೆ ವಿಶ್ವವಿದ್ಯಾಲಯ, ಬೆಂಗಳೂರು ರವರ ಸಹಯೋಗದೊಂದಿಗೆ (NLSU) ಕ್ರಮ ಕೈಗೊಳ್ಳಲಾಗುತ್ತಿದೆ.

- ಬಾಲ್ಯವಿವಾಹ ನಿಷೇಧ ಕಾಯ್ದೆಯ ಅನುಷ್ಠಾನಕ್ಕಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಒಳಗೊಂಡಂತೆ ಪ್ರಮುಖ 10 ಇಲಾಖೆಗಳಲ್ಲಿ ವಿವಿಧ ಹಂತಗಳಲ್ಲಿ ಸೇವೆ ಸಲ್ಲಿಸುತ್ತಿರುವ (ರಾಜ್ಯ/ಜಿಲ್ಲಾ/ತಾಲ್ಲೂಕು/ಗ್ರಾಮ ಪಂಚಾಯತ್ ವ್ಯಾಪ್ತಿಯ) 58,522 ಅಧಿಕಾರಿಗಳನ್ನು ಬಾಲ್ಯವಿವಾಹ ನಿಷೇಧಾಧಿಕಾರಿಗಳೆಂದು ಗುರುತಿಸಿ ಅವರ ಅಧಿಕಾರದ ವ್ಯಾಪ್ತಿಯನ್ನು ನಿಗದಿ ಪಡಿಸಿ ವಿವಿಧ ಹಂತಗಳಲ್ಲಿ ನೇಮಿಸಿ 2018ರಲ್ಲಿ ಸರ್ಕಾರಿ ಆದೇಶ ಹೊರಡಿಸಲಾಗಿದೆ. ಅವರ ಪ್ರಕಾರ್ಯ ಮತ್ತು ಕರ್ತವ್ಯಗಳ ಬಗ್ಗೆ ಮಾಹಿತಿ ನೀಡಲಾಗಿದೆ, 10 ವಿವಿಧ ಇಲಾಖೆಗಳ ನಿರ್ದಿಷ್ಟ ಪಾತ್ರಗಳ ಬಗ್ಗೆ ಸ್ಪಷ್ಟಪಡಿಸಲಾಗಿದೆ.

- 2022-23ನೇ ಸಾಲಿನಲ್ಲಿ ಬಾಲ್ಯವಿವಾಹ ನಿಷೇಧ ಕಾಯ್ದೆ ಕುರಿತು ಭಾಗೀದಾರರ ಇಲಾಖೆಗಳ ಬಾಲ್ಯವಿವಾಹ ನಿಷೇದಾಧಿಕಾರಿಗಳಿಗೆ ಅವರ ಕರ್ತವ್ಯ ನಿರ್ವಹಿಸಲು ಅನುಕೂಲವಾಗುವಂತೆ ಸಿದ್ಧಪಡಿಸಲಾಗಿರುವ ಕ್ರಮಬದ್ಧ ಕಾರ್ಯಾವಿಧಾನ (SOP) ಕುರಿತಂತೆ ತರಬೇತಿಗಾಗಿ ಪ್ರತಿ ಜಿಲ್ಲೆಗೆ ರೂ. 50,000/-ಗಳಂತೆ ಒಟ್ಟು ರೂ. 15,50,000/-ಗಳ ಅನುದಾನವನ್ನು 31 ಜಿಲ್ಲೆಗಳಿಗೆ ಬಿಡುಗಡೆ ಮಾಡಿ ತರಬೇತಿ ಹಮ್ಮಿಕೊಳ್ಳಲು ಕ್ರಮ ಕೈಗೊಳ್ಳಲಾಗಿದೆ.

- 2022-23ನೇ ಸಾಲಿನಲ್ಲಿ ಆದೇಶ ಸಂಖ್ಯೆ: ಮಮಅಇ: ಬಾವಿನಿಕೋ: ಆಯವ್ಯಯ: 01: 2022-23 ದಿನಾಂಕ:05.01.2023ರಲ್ಲಿ ಬಾಲ್ಯವಿವಾಹ ನಿಷೇಧ ಕುರಿತು ಯುವಜನಾಂಗದಲ್ಲಿ ಅರಿವು ಮೂಡಿಸಲು ವಿವಿಧ ಇಲಾಖೆಗಳ ಸಹಕಾರದೊಂದಿಗೆ ಯುವ ಮೇಳ ಹಾಗೂ ಇತರೆ ಐಇಸಿ ಚಟುವಟಿಕೆಗಳನ್ನು ಕೈಗೊಳ್ಳಲು ರಾಜ್ಯದ 4 ವಿಭಾಗಗಳಲ್ಲಿನ ಬೆಳಗಾವಿ, ಚಾಮರಾಜನಗರ, ಯಾದಗಿರಿ ಮತ್ತು ತುಮಕೂರು ಜಿಲ್ಲೆಗಳಿಗೆ ರೂ. 5.00 ಲಕ್ಷಗಳಂತೆ ಒಟ್ಟು ರೂ. 20.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ.

- ಸುರಕ್ಷಿಣಿ:- ಬಾಲ್ಯ ವಿವಾಹದಿಂದ ಮಕ್ಕಳ ರಕ್ಷಣೆ ಹಾಗೂ ಅನುಸರಣಾ ಮಾಹಿತಿ ಬಾಲ್ಯವಿವಾಹ ನಿಷೇಧ ಕಾಯ್ದೆಯ ಸಮರ್ಪಕ ಅನುಷ್ಠಾನಕ್ಕಾಗಿ ಹಾಗೂ ಮೇಲ್ವಿಚಾರಣೆಗಾಗಿ ಸುರಕ್ಷಿಣಿ ಎಂಬ ವೆಬ್ ಪೋರ್ಟಲ್ ನ್ನು NIC ಸಹಯೋಗದಿಂದ ಅಭಿವೃದ್ಧಿಪಡಿಸಲಾಗಿದ್ದು, ಸದರಿ ವೆಬ್ ಪೋರ್ಟಲ್ ಕುರಿತು ಪ್ರಕರಣಗಳ ದತ್ತಾಂಶ ಸಂಗ್ರಹಣೆಗೆ ಹಾಗೂ ಮೇಲ್ವಿಚಾರಣೆಗೆ ಅನುಕೂಲವಾಗುತ್ತಿದ್ದು, ಸದ್ಯದಲ್ಲಿಯೇ ಚಾಲನೆಗೆ ಕ್ರಮ ವಹಿಸಲಾಗುತ್ತಿದೆ.

- ಬಾಲ್ಯವಿವಾಹವನ್ನು ತಡೆಗಟ್ಟುವ ಉದ್ದೇಶದಿಂದ ಕೊಪ್ಪಳ ಜಿಲ್ಲೆಯಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಿರುವ ಸ್ಫೂರ್ತಿ ಯೋಜನೆಯನ್ನು ರಾಜ್ಯದ ಇತರೆ 5 ಜಿಲ್ಲೆಗಳಾದ ಬಾಗಲಕೋಟೆ, ಬೆಳಗಾವಿ, ಕಲಬುರ್ಗಿ, ರಾಯಚೂರು ಮತ್ತು ವಿಜಯಪುರ ಜಿಲ್ಲೆಗಳ 11 ತಾಲ್ಲೂಕು(ಹುನಗುಂದ, ಸವದತ್ತಿ, ಗೋಕಾಕ್, ಹುಕ್ಕೇರಿ, ಚಿಂಚೋಳಿ, ಜೇವರ್ಗಿ, ಲಿಂಗಸುಗೂರು, ದೇವದುರ್ಗ, ಮುದ್ದೇಬಿಹಾಳ, ಇಂಡಿ) ಗಳಲ್ಲಿ ಸ್ಫೂರ್ತಿ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮಕೈಗೊಳ್ಳಲಾಗುತ್ತಿದೆ

## ಅನುಬಂಧ-2

## ಮಹಿಳೆಯರ ಮೇಲಿನ ಭಯಾನಕ ಅಪರಾಧ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿದ್ದು, ಇದನ್ನು ತಡೆಗಟ್ಟುವಲ್ಲಿ ಸರ್ಕಾರ ಕೈಗೊಳ್ಳುತ್ತಿರುವ ಕ್ರಮಗಳ ವಿವರ

- **ಸಾಂತ್ವನ ಯೋಜನೆ:-** ಸಮಾಜದಲ್ಲಿ ವರದಕ್ಷಿಣೆ ಕಿರುಕುಳ, ಲೈಂಗಿಕ ಕಿರುಕುಳ, ಕೌಟುಂಬಿಕ ದೌರ್ಜನ್ಯ, ಅತ್ಯಾಚಾರಕ್ಕೊಳಗಾದ ಮಹಿಳೆಯರಿಗೆ ಕಾನೂನು ನೆರವು ಹಾಗೂ ಆಪ್ತ ಸಮಾಲೋಚನೆಯನ್ನು ಒದಗಿಸಲಾಗುತ್ತಿದೆ. ಪ್ರಸ್ತುತ ರಾಜ್ಯದಲ್ಲಿ 178 ಸಾಂತ್ವನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

- **ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ನಿಯಮ 2006:-** ಕುಟುಂಬದಲ್ಲಿ ಮಹಿಳೆಯರ ಮೇಲೆ ದೌರ್ಜನ್ಯ ಉಂಟಾದಾಗ, ನ್ಯಾಯಾಲಯದ ಮುಖಾಂತರ ಮಹಿಳೆಯರಿಗೆ ಆರ್ಥಿಕ ಪರಿಹಾರ, ರಕ್ಷಣಾ ಆದೇಶ, ವಾಸದ ಆದೇಶ, ಮಕ್ಕಳ ವಶ, ತಾತ್ಕಾಲಿಕ ಆಶ್ರಯ, ವೈದ್ಯಕೀಯ ಹಾಗೂ ಕಾನೂನು ನೆರವನ್ನು ಒದಗಿಸಲು ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ಹಾಗೂ ನಿಯಮ 2006ನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಸ್ತುತ 47 ತಾಲ್ಲೂಕುಗಳಲ್ಲಿ ಮಾತ್ರ ಪ್ರತ್ಯೇಕ ಸಂರಕ್ಷಣಾಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದು, ಉಳಿದ ತಾಲ್ಲೂಕುಗಳಲ್ಲಿ ಶಿಶುಅಭಿವೃದ್ಧಿ ಯೋಜನಾಧಿಕಾರಿಗಳೇ ಸಂರಕ್ಷಣಾಧಿಕಾರಿಗಳಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಜಿಲ್ಲಾ ಮಟ್ಟದಲ್ಲಿ 30 ಜಿಲ್ಲೆಗಳ ಉಪನಿರ್ದೇಶಕರು ಸಂರಕ್ಷಣಾಧಿಕಾರಿಗಳಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

1) ರಾಜ್ಯದ ಎಲ್ಲಾ ತಾಲ್ಲೂಕುಗಳ ಶಿಶುಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಯಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಸಹಯೋಗದಲ್ಲಿ ಉಚಿತ ಕಾನೂನು ಸಲಹಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಆ ಕೇಂದ್ರಗಳಲ್ಲಿ ನುರಿತ ನ್ಯಾಯವಾದಿಗಳು ಪ್ರತಿ ಬುಧವಾರ ಮತ್ತು ಶನಿವಾರ ಉಚಿತ ಕಾನೂನು ಸಲಹೆ ನೀಡುತ್ತಿದ್ದಾರೆ.

2) ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ರಕ್ಷಣೆ, ಅಲ್ಪಾವಧಿ ಆಶ್ರಯ ಮತ್ತು ಸಲಹೆ ಹಾಗು ಮಾರ್ಗದರ್ಶನ ಒದಗಿಸಲು ರಾಜ್ಯದಲ್ಲಿ ಸ್ವಾಧಾರ ಕೇಂದ್ರಗಳು, ಅಲ್ಪಾವಧಿ ವಸತಿಗೃಹಗಳು, ಸಾಂತ್ವನ ಕೇಂದ್ರಗಳನ್ನು ರಕ್ಷಣಾ ಗೃಹಗಳೆಂದು ಅಧಿಸೂಚನೆ ಹೊರಡಿಸಲಾಗಿದ್ದು, ನೊಂದ ಮಹಿಳೆಯರು ಇಲ್ಲಿ ಸಮಾಲೋಚನೆ ಹಾಗು ರಕ್ಷಣೆ, ಅಲ್ಪಾವಧಿ ಆಶ್ರಯ ಪಡೆಯಬಹುದಾಗಿದೆ.

3) ದಿನಾಂಕ:24.06.2022, 27.06.2022 & 28.06.2022ರಂದು ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆಯ ಕುರಿತು 4 ವಿಭಾಗೀಯಮಟ್ಟದಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ, ಸಂರಕ್ಷಣಾಧಿಕಾರಿಗಳಿಗೆ ಹಾಗೂ ಒನ್ ಸ್ಟಾಪ್ ಸೆಂಟರ್ ನ ಸಮಾಲೋಚಕರಿಗೆ ಒಂದು ದಿನದ ತರಬೇತಿಯನ್ನು ಹಮ್ಮಿಕೊಳ್ಳಲಾಗಿದ್ದು, ಸದರಿ ತರಬೇತಿಯಲ್ಲಿ 252 ಅಧಿಕಾರಿಗಳು/ಸಿಬ್ಬಂದಿಗಳು ಪಾಲ್ಗೊಂಡಿದ್ದರು.

4) ಜಿಲ್ಲಾ ಮಟ್ಟದಲ್ಲಿ ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆಯ ಕುರಿತು ಭಾಗೀದಾರ ಇಲಾಖೆಗಳೊಂದಿಗೆ ಹಾಗೂ ಜಿಲ್ಲಾ ಮಟ್ಟದ ಕಾನೂನು ಸೇವಾ ಪ್ರಾಧಿಕಾರದ ಸಹಯೋಗದೊಂದಿಗೆ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

5) "75ನೇ ವರ್ಷದ ಭಾರತ ಸ್ವಾತಂತ್ರ್ಯದ ಅಮೃತ ಮಹೋತ್ಸವ" ಅಂಗವಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್‌ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪ್ರಧಾನ ಕಾರ್ಯದರ್ಶಿ, ರವರ ಸಮನ್ವಯದೊಂದಿಗೆ ಜಂಟಿ ಸುತ್ತೋಲೆ ಸಂಖ್ಯೆ: ಕಪಂರಾಅ/ ಅಭಿವೃದ್ಧಿ/305 (ಭಾಗ-2)/2021 ದಿನಾಂಕ: 21.09.2021ರಂತೆ **'ದೌರ್ಜನ್ಯದಿಂದ ಮುಕ್ತಿ'** ಕಾರ್ಯಕ್ರಮ ಅನುಷ್ಠಾನವನ್ನು 02.10.2021 ರಿಂದ 10.12.2021 ರವರೆಗೆ ಗ್ರಾಮ ಮಟ್ಟದಲ್ಲಿ ವಿವಿಧ ರೀತಿಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಯಿತು.

6) "ಭಯ, ತಾರತಮ್ಯ ಮತ್ತು ದೌರ್ಜನ್ಯವಿಲ್ಲದ ಘನತೆಯ ಜೀವನಕ್ಕೆ ಒದಗುವ ಅಡೆತಡೆಗಳನ್ನು ಪರಿಹರಿಸುವ ಮೂಲಕ ಮಹಿಳೆಯರು ಮತ್ತು ಲಿಂಗ ವೈವಿಧ್ಯಮಯ ವ್ಯಕ್ತಿಗಳ ಹಕ್ಕುಗಳನ್ನು ಸಂಸ್ಥೆಗಳ ಮೂಲಕ ಮುನ್ನಡೆಸುವ" ಬಗ್ಗೆ 'ಲಿಂಗತ್ವಾಧಾರಿತ ದೌರ್ಜನ್ಯ ಅಭಿಯಾನ' ಚಟುವಟಿಕೆಗಳನ್ನು ಮಮಅ ಇಲಾಖೆ ಹಾಗೂ ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಸಂಯೋಜನೆಯೊಂದಿಗೆ ಕ್ರಮಕೈಗೊಳ್ಳಲು ಎಲ್ಲಾ ಜಿಲ್ಲಾ ಪಂಚಾಯತ್‌ಗಳಿಗೆ ಸೂಚನೆ ನೀಡಿ ದಿ:17.11.2022 ರ 'ಜಂಟಿ ಸುತ್ತೋಲೆ' ಹೊರಡಿಸಲಾಗಿದೆ.

7) ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯಿದೆಯಡಿ ಕಾರ್ಯ ನಿರ್ವಹಿಸುತ್ತಿರುವ ಸಂರಕ್ಷಣಾಧಿಕಾರಿಗಳು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸರ್ಕಾರದ ಕಾರ್ಯದರ್ಶಿಗಳಿಂದ ದಿನಾಂಕ:21.04.2022 ರಂದು 'ಸುತ್ತೋಲೆ' ಹೊರಡಿಸಲಾಗಿದೆ.

8) ಮಹಿಳೆಯರ ಮೇಲಿನ ದೌರ್ಜನ್ಯ ತಡೆಗಟ್ಟುವ ಕಾರ್ಯ ನಿರ್ವಹಣೆಗೆ ಸರ್ಕಾರಿ/ಅರೆಸರ್ಕಾರಿ/ಸರ್ಕಾರಿ ಸ್ವಾಮ್ಯದ ಇಲಾಖೆ/ನಿಗಮ/ಮಂಡಳಿಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಪ್ರಥಮ ಪ್ರತಿಸ್ಪಂಧಕರನ್ನಾಗಿ (First Responedent) ನೇಮಿಸಿ ದಿನಾಂಕ: 18.06.2022 ರಂದು ಅಪರಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರವರಿಂದ 'ಸುತ್ತೋಲೆ' ಹೊರಡಿಸಲಾಗಿದೆ.

9) ನಿಮ್ಹಿಡ್, ಬೆಂಗಳೂರು ಸಂಸ್ಥೆಯವರು "ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ" ಕುರಿತು ದಿನಾಂಕ:17.08.2022 ಮತ್ತು 18.08.2022 ರಂದು ಇಲಾಖೆಯ ಸಂರಕ್ಷಣಾಧಿಕಾರಿಗಳು ಹಾಗೂ ರಕ್ಷಣಾ ಗೃಹಗಳ 100 ಜನ ಸಿಬ್ಬಂದಿಗಳಿಗೆ ತರಬೇತಿ ನೀಡಲಾಗಿದೆ.

- **ಉತ್ಕೃಷ್ಟತಾ ಕೇಂದ್ರ ಯೋಜನೆ**:- ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಸೂಕ್ತ ನೆರವು ಹಾಗೂ ಮಾರ್ಗದರ್ಶನ ನೀಡಲು ನಿಮ್ಹಾನ್ಸ್ ಮತ್ತು ರಾಷ್ಟ್ರೀಯ ಕಾನೂನು ಶಾಲಾ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಪ್ರಾರಂಭಿಸಲು ಒಡಂಬಡಿಕೆ (MOU) ಮಾಡಿಕೊಂಡು ಉತ್ಕೃಷ್ಟತಾ ಕೇಂದ್ರ ಅನುಷ್ಠಾನಗೊಳಿಸಲಾಗುತ್ತಿದೆ.

- **ಮಹಿಳಾ ಸಹಾಯವಾಣಿ-181:** ಮಹಿಳೆಯರಿಗೆ ಮಾಹಿತಿಯನ್ನು ನೀಡಲು ಹಾಗೂ ದೌರ್ಜನ್ಯ ಮತ್ತು ಸಂಕಷ್ಟದಲ್ಲಿರುವ ಮಹಿಳೆಯರಿಗೆ ತುರ್ತು ನೆರವನ್ನು ಒದಗಿಸುವ ನಿಟ್ಟಿನಲ್ಲಿ ಯೂನಿವರ್ಸಲೈಸೇಷನ್ ಆಫ್ ವುಮೆನ್ ಹೆಲ್ಪ್ ಲೈನ್-181 ಎಂಬ ಉಚಿತ ದೂರವಾಣಿ ಸೇವೆಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ 104-ಸಹಾಯವಾಣಿ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ. ಈ ಸೇವೆಯನ್ನು ದಿನದ 24X7 ಗಂಟೆಗಳು ರಾಜ್ಯಾದ್ಯಂತ ಒದಗಿಸಲಾಗುತ್ತಿದೆ.

## <u>ಕೇಂದ್ರ ಸರ್ಕಾರದ ಯೋಜನೆಗಳು</u>

- **ಸ್ವಾಧಾರ ಗೃಹ**:- ಸಂಕಷ್ಟಕರ ಪರಿಸ್ಥಿತಿಯಲ್ಲಿರುವ ಮಹಿಳೆಯರಿಗಾಗಿ ತಾತ್ಕಾಲಿಕ ಆಶ್ರಯ, ವೈದ್ಯಕೀಯ ಸೇವೆ, ಆಪ್ತ ಸಮಾಲೋಚನೆ ಮತ್ತು ಕಾನೂನು ನೆರವು ಒದಗಿಸಲಾಗುತ್ತಿದೆ. ಪ್ರಸ್ತುತ ರಾಜ್ಯಾದ್ಯಂತ 52 ಸ್ವಾಧಾರ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

- **ಒನ್ ಸ್ಟಾಪ್ ಸೆಂಟರ್ (ಸಖಿ)**:- ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ಸಮಗ್ರ ಸೌಲಭ್ಯ ಅಂದರೆ, ವೈದ್ಯಕೀಯ ಚಿಕಿತ್ಸೆ ಮತ್ತು ನೆರವು, ಪೊಲೀಸ್ ನೆರವು, ಕಾನೂನು ನೆರವು ಹಾಗೂ ಸಮಾಲೋಚನೆ ವ್ಯವಸ್ಥೆಗಳನ್ನು ಒನ್ ಸ್ಟಾಪ್ ಸೆಂಟರ್‌ನಲ್ಲಿ ಒದಗಿಸಲಾಗುತ್ತಿದೆ. ರಾಜ್ಯದ ಎಲ್ಲಾ 30 ಜಿಲ್ಲೆಗಳಲ್ಲಿ ಒನ್ ಸ್ಟಾಪ್ ಸೆಂಟರ್ (ಸಖಿ)ಗಳು ಕಾರ್ಯನಿರ್ವಹಿಸುತ್ತಿವೆ.

## ಅನುಬಂಧ-3

**ಶ್ರೀ ಎಂ. ನಾಗರಾಜು ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು ಇವರು ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 547 (671) ಕ್ಕೆ ಉತ್ತರ**

**31 ಜಿಲ್ಲೆಗಳ ಏಪ್ರಿಲ್-2022 ರಿಂದ ಜನವರಿ-2023ರವರೆಗಿನ ಬಾಲ್ಯ ವಿವಾಹ ಪ್ರಕರಣಗಳ ಮಾಹಿತಿ**

| ಕ್ರ. ಸಂ | ಜಿಲ್ಲೆಯ ಹೆಸರು | ದೂರುಗಳ ಸಂಖ್ಯೆ | ತಡೆದ ಸಂಖ್ಯೆ | ನಡೆದ ಸಂಖ್ಯೆ | ಎಫ್ ಐ ಆರ್ ಸಂಖ್ಯೆ |
|---|---|---|---|---|---|
| 1 | ಮಂಡ್ಯ | 126 | 75 | 51 | 44 |
| 2 | ಶಿವಮೊಗ್ಗ | 96 | 57 | 39 | 37 |
| 3 | ಮೈಸೂರು | 175 | 141 | 34 | 33 |
| 4 | ಬಾಗಲಕೋಟೆ | 121 | 96 | 25 | 16 |
| 5 | ರಾಮನಗರ | 59 | 37 | 22 | 9 |
| 6 | ವಿಜಯಪುರ | 112 | 96 | 16 | 7 |
| 7 | ಬೆಳಗಾವಿ | 116 | 101 | 15 | 13 |
| 8 | ಬೆಂಗಳೂರು (ಗ್ರಾ) | 55 | 46 | 9 | 8 |
| 9 | ಹಾಸನ | 47 | 38 | 9 | 8 |
| 10 | ಬಳ್ಳಾರಿ | 123 | 115 | 8 | 7 |
| 11 | ತುಮಕೂರು | 84 | 76 | 8 | 7 |
| 12 | ಚಿಕ್ಕಮಗಳೂರು | 77 | 69 | 8 | 7 |
| 13 | ಕಲಬುರ್ಗಿ | 130 | 124 | 6 | 0 |
| 14 | ಚಿಕ್ಕಬಳ್ಳಾಪುರ | 99 | 93 | 6 | 6 |
| 15 | ಕೋಲಾರ | 63 | 57 | 6 | 6 |
| 16 | ದಾವಣಗೆರೆ | 41 | 36 | 5 | 5 |
| 17 | ಧಾರವಾಡ | 28 | 23 | 5 | 5 |
| 18 | ಬೆಂಗಳೂರು (ನ) | 27 | 22 | 5 | 4 |
| 19 | ಚಿತ್ರದುರ್ಗ | 108 | 105 | 3 | 3 |
| 20 | ವಿಜಯನಗರ | 55 | 52 | 3 | 3 |
| 21 | ಗದಗ | 73 | 71 | 2 | 2 |
| 22 | ಚಾಮರಾಜನಗರ | 41 | 39 | 2 | 2 |
| 23 | ಕೊಡಗು | 8 | 6 | 2 | 2 |
| 24 | ರಾಯಚೂರು | 80 | 79 | 1 | 1 |
| 25 | ಕೊಪ್ಪಳ | 60 | 59 | 1 | 1 |
| 26 | ಹಾವೇರಿ | 40 | 39 | 1 | 0 |
| 27 | ಉತ್ತರ ಕನ್ನಡ | 28 | 27 | 1 | 0 |
| 28 | ಯಾದಗಿರಿ | 78 | 78 | 0 | 0 |
| 29 | ಬೀದರ್ | 44 | 44 | 0 | 0 |
| 30 | ದಕ್ಷಿಣ ಕನ್ನಡ | 10 | 10 | 0 | 0 |
| 31 | ಉಡುಪಿ | 1 | 1 | 0 | 0 |
| | **ಒಟ್ಟು** | **2205** | **1912** | **293** | **236** |